ಆ) ಬಿಂಡಿಗನವಿಲೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 2 ಎ.ಎನ್.ಎಂ. ಹುದ್ದೆಗಳು ಖಾಲಿ ಇದ್ದು ಅವುಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಇ) ಭಾರತ ಸರ್ಕಾರವು 1998-1999, 1999-2000, 2000-2001ನೇ ಸಾಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಶೂನ್ಯ ಗುರಿ ನಿಗಧಿಪಡಿಸಿರುವುದರಿಂದ ಕಾಳಿಂಗನಹಳ್ಳಿ ಗ್ರಾಮ ಹಾಗೂ ಹೊನ್ನಾವರ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಸಾಧ್ಯವಾಗಿರುವುದಿಲ್ಲ.

ನಾಗಮಂಗಲ ತಾಲ್ಲೂಕಿನಲ್ಲಿ ಕಿರು ನೀರು ಯೋಜನೆ.

163(287)

ಶ್ರೀ ಚೆಲುವರಾಯ ಸ್ವಾಮಿ ಎನ್(ನಾಗಮಂಗಲ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ನಾಗಮಂಗಲ ತಾಲ್ಲೂಕಿನಲ್ಲಿ 2000-01ನೇ ಇಸವಿಯಲ್ಲಿ ಮಂಜೂರಾಗಿರುವ ಕುಡಿಯುವ ನೀರಿನ ಯೋಜನೆಗಳು ಎಷ್ಟು; ಅಪೂರ್ಣ ಯೋಜನೆಗಳನ್ನು ಎಂದು ಪೂರ್ಣಗೊಳಿಸಲಾಗುವುದು;

ಆ. ಕೊಳವೆ ಬಾವಿ, ಕಿರು ನೀರು ಸರಬರಾಜು ಮತ್ತು ನಳ ನೀರು ಯೋಜನೆಯಡಿಯಲ್ಲಿ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗಿದೆ; (ಮಾಹಿತಿ ಒದಗಿಸುವುದು)

ಇ. ರಸ್ತೆ ಹಾಗೂ ಕುಡಿಯುವ ನೀರಿನ ಯೋಜನೆಗಳಡಿಯಲ್ಲಿ ಬಿಡುಗಡೆಯಾದ ಹಣವೆಷ್ಟು? ಖರ್ಚಾಗಿರುವ ಹಣವೆಷ್ಟು? (ಮಾಹಿತಿ ಒದಗಿಸುವುದು)

ಈ. ಮಳೆ ಹಾನಿಯಿಂದ ಆದ ಕೆರೆ ಕಟ್ಟಡಗಳ ದುರಸ್ತಿ ಮತ್ತು ರಸ್ತೆಗಳ ದುರಸ್ತಿಗೆ ಸರ್ಕಾರವನ್ನು ಎಷ್ಟು ಒತ್ತಾಯಿಸಿದ್ದರೂ ಸಹ ಕ್ರಮ ಕೈಗೊಳ್ಳದೇ ಇರಲು ಕಾರಣವೇನು; ಕೂಡಲೇ ಸರ್ಕಾರವು ಕ್ರಮ ಕೈಕೊಳ್ಳುವುದೇ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ. ನಾಗಮಂಗಲ ತಾಲ್ಲೂಕಿನಲ್ಲಿ 2000-01ನೇ ಸಾಲಿಗೆ 6 ಕೊಳವೆ ನೀರು

ಸರಬರಾಜು ಯೋಜನೆಗಳು ಮತ್ತು 2 ಕಿರು ನೀರು ಸರಬರಾಜು ಯೋಜನೆಗಳು ಅನುಮೋದನೆಯಾಗಿವೆ. ಅಪೂರ್ಣ ಯೋಜನೆಗಳನ್ನು 2001-02ನೇ ಸಾಲಿನಲ್ಲಿ ಪೂರ್ಣಗೊಳಿಸಲು ಉದ್ದೇಶಿಸಿದೆ.

ಆ. 77 ಕೊಳವೆ ನೀರು ಸರಬರಾಜು ಯೋಜನೆಗಳು, 159 ಕಿರು ನೀರು ಸರಬರಾಜು ಯೋಜನೆಗಳು ಮತ್ತು 1308 ಕೊಳವೆ ಬಾವಿಗಳ ಮುಖಾಂತರ, 509 ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲಾಗಿದೆ.

ಇ. ರಸ್ತೆ ಹಾಗೂ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಅನುಕ್ರಮವಾಗಿ ರೂ. 117.17 ಲಕ್ಷ ಹಾಗೂ 114.66 ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನಗಳು ಪೂರ್ತಿ ವೆಚ್ಚವಾಗಿವೆ.

ಈ. ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ರೂ.2.45 ಲಕ್ಷಗಳು ಬಿಡುಗಡೆಯಾಗಿದ್ದು, 3 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇನ್ನುಳಿದ ದುರಸ್ತಿ ಕಾಮಗಾರಿಗಳನ್ನು ಅನುದಾನ ಲಭ್ಯತೆಗನುಗುಣವಾಗಿ ಕೈಗೆತ್ತಿಕೊಳ್ಳಲಾಗುವುದು.

ಮಂಡ್ಯ ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಶಿಕ್ಷಕರ ಕೊರತೆ.

164(288)

ಶ್ರೀ ಚೆಲುವರಾಯಸ್ವಾಮಿ ಎನ್.(ನಾಗಮಂಗಲ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಮಂಡ್ಯ ಜಿಲ್ಲೆಯಲ್ಲಿ 900 ಜನ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಾಗಿದ್ದು ನೇಮಕಾತಿ ಆದೇಶ ನೀಡಲು ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗುವುದು;

(ಆ) ಸರ್ಕಾರದ ನಿಬಂಧನೆಗಳ ಆಧಾರದ ಮೇಲೆ ತಾಲ್ಲೂಕಿನಲ್ಲಿರುವ ಶಾಲಾ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನೇಮಕವಾಗಿರಬೇಕಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು, ಇದರ ಬಗ್ಗೆ ಮಾಹಿತಿಯನ್ನು ನೀಡುವುದು.

(ಇ) ಸಂಖ್ಯೆ ಬಲದ ಮೇಲೆ ಹಾಲಿ ಇರುವ ಕೊಠಡಿಗಳ ಸಂಖ್ಯೆ ಹಾಗೂ ಈಗ ನಿರ್ಮಾಣವಾಗಬೇಕಾಗಿರುವ ಕೊಠಡಿಗಳ ಸಂಖ್ಯೆ ಎಷ್ಟು ವಿವರ ಒದಗಿಸುವುದು;